O.S .No. 161/2012
PW-1

ದಿನಾಂಕ: 04-08-2023 ರಂದು ಸಾಕ್ಷಿಗೆ ಪ್ರಮಾಣ ವಚನ ಭೋದಿಸಲಾಯಿತು.

**ಮುಂದುವರೆದ ಪಾಟೀ ಸವಾಲು ಪ್ರತಿವಾದಿ ಪರ ಶ್ರೀ ಎಸ್.ಎಲ್.ಜಿ. ವಕೀಲರಿಂದಃ**

ದಾವಾ ಆಸ್ತಿ ಪಿತ್ರಾರ್ಜಿತ ಆಸ್ತಿ ಎಂದು ತೋರಿಸಲು ನ್ಯಾಕ್ಕೆ ಏನು ದಾಖಲಾತಿ ಕೊಟ್ಟಿದ್ದೀರಿ ಎಂದರೆ ಸಾಕ್ಷಿ ಓದು, ಬರಹ ಬರುವುದಿಲ್ಲ, ಆದರೆ ಕೊಟ್ಟಿದ್ದೇನೆ ಎಂದು ಹೇಳುತ್ತಾರೆ. ವಕೀಲರಿಗೆ ನಿಪಿ-9 ರಂತೆ ಪ್ರತಿವಾದಿಗೆ ನೋಟೀಸ್ ನೀಡಲು ಮಾಹಿತಿಯನ್ನು ನಾನೇ ನೀಡಿರುತ್ತೇನೆ. ಪ್ರತಿವಾದಿ ನಿಪಿ-9 ರಂತೆ ನೀಡಲಾದ ನೊಟೀಸ್ ಗೆ ಪ್ರತ್ಯುತ್ತರ ಉತ್ತರ ನೀಡಿರುತ್ತಾರೆ ಎಂದರೆ ಸರಿಯಲ್ಲ. ನೀವು ನಿಮ್ಮ ಮುಖ್ಯ ವಿಚಾರಣೆ ಪ್ರಮಾಣ ಪತ್ರದಲ್ಲಿ ಪ್ರತಿವಾದಿಗಳಿಗೆ ನೀಡಿದ ತಿಳುವಳಿಕೆ ಪತ್ರಕ್ಕೆ ಪ್ರತಿವಾದಿಗಳು ಅಸಮಂಜಸವಾಗಿ ಪ್ರತ್ಯುತ್ತರ ತಿಳುವಳಿಕೆ ಪತ್ರ ಕೊಟ್ಟಿದ್ದಾರೆಂದು ಬರೆಸಿದ್ದೀರಾ ಎಂದರೆ ಸರಿ.

ದಾವಾ ಆಸ್ತಿಯನ್ನು 1 ಮತ್ತು 2 ನೇ ಪ್ರತಿವಾದಿಗಳು 3 ನೇ ಪ್ರತಿವಾದಿಗೆ ಮಾರಾಟ ಮಾಡಿರುತ್ತಾರೆಂದರೆ ಸಾಕ್ಷಿ ಕದ್ದು ಮಾಡಿರುತ್ತಾರೆ ಎಂದು ಹೇಳುತ್ತಾರೆ. 2012 ರಿಂದ ಕಂದಾಯ ದಾಖಲಾತಿಗಳೆಲ್ಲ 3 ನೇ ಪ್ರತಿವಾದಿಯ ಹೆಸರಿಗೆ ವರ್ಗಾವಣೆಗೊಂಡಿವೆ ಎಂದರೆ ಸಾಕ್ಷಿ ಮಾಡಿಕೊಂಡಿದ್ದಾರೆ ಎಂದು ಹೇಳುತ್ತಾರೆ. ಸದರಿ ದಾಖಲೆಗಳನ್ನೇ ನೀವು ನ್ಯಾಕ್ಕೆ ಕೊಟ್ಟಿರುತ್ತೀರಾ ಎಂದರೆ ಸರಿಯಲ್ಲ.

ದಾವಾ ಆಸ್ತಿ ಮೂಲತಃ ಹಿರಿಯರ ಆಸ್ತಿ ಎಂದು ತೋರಿಸಲು ನ್ಯಾಕ್ಕೆ ಏನು ದಾಖಲಾತಿ ಕೊಟ್ಟಿಲ್ಲ ಎಂದರೆ ಸರಿಯಲ್ಲ. ದಾವಾ ಆಸ್ತಿ 2 ನೇ ಪ್ರತಿವಾದಿಯ ಸ್ವಯಾರ್ಜಿತ ಸ್ವತ್ತಾಗಿದ್ದು, ಸದರಿ ಆಸ್ತಿಯಲ್ಲಿ ನಿಮಗಾಗಲೀ, 1 ನೇ ಪ್ರತಿವಾದಿಗಾಗಲೀ ಯಾವುದೇ ಹಕ್ಕು, ಹಿತಾಸಕ್ತಿ ಇಲ್ಲ ಎಂದರೆ ಸರಿಯಲ್ಲ.

ಇತ್ತಿಚೆಗೆ ದಾವಾ ಸ್ವತ್ತಿನ ಬೆಲೆ ದುಬಾರಿಯಾದ ಕಾರಣ, ನೀವು ಅನ್ಯತಾ ಪಾಯಿದೆ ಪಡೆಯಲು ದಾವೆ ಹೂಡಿರುತ್ತೀರಾ ಎಂದರೆ ಸರಿಯಲ್ಲ.

ಮರುವಿಚಾರಣೆ ಇಲ್ಲ.

ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು.

ಓ.ಹೇ.ಕೇ.ಸರಿ ಇದೆ.

ಪ್ರಧಾನ ಸಿವಿಲ್ ಮತ್ತು ಜೆ.ಎಂ.ಎಫ್.ಸಿ.
ನ್ಯಾಯಾಧೀಶರು, ಹುಣಸೂರು.